Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

Date: 16-03-2022

**ಪತ್ರಿಕಾ ಪ್ರಕಟಣೆ:**

## ಶ್ರೀ. ಆರ್ ವಿ ದೇಶಪಾಡೆ ಅವರ ಜನ್ಮದಿನದ ಪ್ರಯುಕ್ತ ರಕ್ತದಾನ ಶಿಬಿರ

ಕರ್ನಾಟಕ ಲಾ ಸೊಸೈಟಿಯ ವಿಶ್ವನಾಥರಾವ್ ದೇಶಪಾಂಡೆ ತಾಂತ್ರಿಕ ಮಹಾವಿದ್ಯಾಲಯ, ಹಳಿಯಾಳದಲ್ಲಿ ಮಾರ್ಚ್ 16 ರಂದು ಸನ್ಮಾನ್ಯ ಶ್ರೀ ಆರ್. ವಿ. ದೇಶಪಾಂಡೆಯವರ ಜನ್ಮದಿನದ ಪ್ರಯುಕ್ತವಾಗಿ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು. ಈ ಕಾರ್ಯಕ್ರಮವನ್ನು ಹಳಿಯಾಳದ ವಿ.ಆರ್.ಡಿ.ಎಮ್. ಟ್ರಸ್ಟ್, ಲಾಯನ್ಸ್ ಕ್ಲಬ್, ಧಾರವಾಡ ನವನಗರದ ರೋಟರಿ ಬ್ಲಡ್‌ಬ್ಯಾಂಕ್ ಮತ್ತು ಮಹಾವಿದ್ಯಾಲಯದ ಎನ್.ಎಸ್.ಎಸ್. ಘಟಕದ ಜಂಟಿ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಬೆಳಿಗ್ಗೆ 10:00 ಘಂಟೆಗೆ ಆರಂಭವಾದ ಉದ್ಘಾಟನಾ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ನಿಡಸೋಸಿಯ ಶ್ರೀಸಿದ್ಧ ಸಂಸ್ಥಾನ ಮಠದ ಶ್ರೀಮನ್ನಿರಂಜನ ಜಗದ್ಗುರು ಶಿವಲಿಂಗೇಶ್ವರ ಮಹಾಸ್ವಾಮಿಗಳು ರಕ್ತದಾನ ಮಾಡಿದ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಧಾರವಾಡ ನವನಗರದ ರೋಟರಿ ಬ್ಲಡ್ ಬ್ಯಾಂಕ್‌ನ ಡಾ॥ ಉಮೇಶ ಹಳ್ಳಿಕೇರಿಯವರು ಮಾತನಾಡುತ್ತ ಮಹಾವಿದ್ಯಾಲಯವು ವರ್ಷಕ್ಕೆರಡು ಬಾರಿ ತಪ್ಪದೆ ರಕ್ತದಾನ ಶಿಬಿರವನ್ನು ಆಯೋಜಿಸುತ್ತಿರುವುದು ಪ್ರಶಂಸನೀಯ. ಈ ಸೇವೆ ಹೀಗೆಯೇ ಮುಂದುವರಿಯಲಿ ಎಂದು ಆಶಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ವಿ ಎ ಕುಲಕರ್ಣಿ ಅವರು ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ರಕ್ತದಾನವನ್ನು ಮಾಡಬೇಕೆಂದು ಕರೆ ನೀಡಿದರು. ಪ್ರಾಂಶುಪಾಲರು ಮತ್ತು ಆಡಳಿತ ವಿಭಾಗ ಮುಖ್ಯಸ್ಥರಾದ ಪ್ರೊ. ಮಂಜುನಾಥ ಡಿ ಸಹಿತ ಸುಮಾರು 70 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ಸಂದರ್ಭದಲ್ಲಿ ರಕ್ತದಾನ ಮಾಡಿದರು.

ಪ್ರೊ. ಸಚಿನ್ ಸೊಂಡೂರ್ ನಿರೂಪಿಸಿದರು. ಮಹಾವಿದ್ಯಾಲಯದ ಆಡಳಿತ ವಿಭಾಗ ಮುಖ್ಯಸ್ಥರಾದ ಪ್ರೊ॥ ಮಂಜುನಾಥ ಡಿ. ಮತ್ತು ಎನ್.ಎಸ್.ಎಸ್ ಸಂಚಾಲಕರಾದ ಪ್ರೊ॥ ವಿ.ಎಮ್ ಚೌಗಲಾ ಮತ್ತು ರೆಡ್ ರಿಬ್ಬನ್ ಕ್ಲಬ್ ಸಂಚಾಲಕರಾದ ಶ್ರೀ. ಮಾರುತಿ ಅವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು

ಪ್ರಾಂಶುಪಾಲರು

Principal
KLS Vishwanathrao Deshpande
Institute of Technology, Haliyal


ಶ್ರೀ ವಿ.ಆರ್. ದೇಶಪಾಂಡೆ ಮೆಮೋರಿಯಲ್ ಟ್ರಸ್ಟ್
ಕೆನರಾ ಬ್ಯಾಂಕ್ ದೇಶಪಾಂಡೆ ಆರ್-ಸೆಟಿ ಹಳಿಯಾಳ
ಕೆ.ಎಲ್.ಎಸ್. ವಿಶ್ವನಾಥರಾವ್ ದೇಶಪಾಂಡೆ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ
ಪದ್ಮಶ್ರೀ ಡಾ|| ಆರ್.ಬಿ. ಪಾಟೀಲ ಕ್ಯಾನ್ಸರ್ ಹಾಸ್ಪಿಟಲ್ ಬ್ಲಡ್ ಬ್ಯಾಂಕ್, ನವನಗರ ಹುಬ್ಬಳ್ಳಿ,
ಲಯನ್ಸ್ ಕ್ಲಬ್ ಹಳಿಯಾಳ,
ಸಂಸ್ಥೆಯ ಅಧ್ಯಕ್ಷರಾದ ಮಾನ್ಯ ಶ್ರೀ ಆರ್. ವಿ. ದೇಶಪಾಂಡೆಯವರ ಹುಟ್ಟುಹಬ್ಬದ ಪ್ರಯುಕ್ತ
"ಸ್ವಯಂ ಪ್ರೇರಿತ ರಕ್ತದಾನ ಶಿಬಿರ"
ದಿನಾಂಕ : 16-03-2022.
ಸ್ಥಳ: ವಿ.ಡಿ.ಐ.ಟಿ. ಹಳಿಯಾಳ
KLS
VDIT


ಶ್ರೀ ವಿ.ಆರ್. ದೇಶಪಾಂಡೆ ಮೆಮೋರಿಯಲ್ ಟ್ರಸ್ಟ್
ಮಾನ್ಯ ಶ್ರೀ ಆರ್. ವಿ. ದೇಶಪಾಂಡೆಯವರ
"ಸ್ವಯಂ ಪ್ರೇರಿತ ರಕ್ತದಾನ ಶಿಬಿರ"
ದಿನಾಂಕ : 16-03-2022.
KLS
VDIT


ಶ್ರೀ ವಿ.ಆರ್. ದೇಶಪಾಂಡೆ ಮೆಮೋರಿಯಲ್ ಟ್ರಸ್ಟ್
“ಸ್ವಯಂ ಪ್ರೇರಿತ ರಕ್ತದಾನ ಶಿಬಿರ”
KLS
VDIT




"ಸ್ವಯಂ ಪ್ರೇರಿತ ರಕ್ತದಾನ ಶಿಬಿರ"


ಶ್ರೀ ವಿ.ಆರ್. ದೇಶಪಾಂಡೆ ಮೆಮೋರಿಯಲ್ ಟ್ರಸ್ಟ್
"ಸ್ವಯಂ ಪ್ರೇರಿತ ರಕ್ತದಾನ ಶಿಬಿರ"
ದಿನಾಂಕ : 16-03-2022,


"ಸ್ವಯಂ ಪ್ರೇರಿತ ರಕ್ತದಾನ ಶಿಬಿರ"
16-03-2022
GIVE BLOOD
GIVE LIFE


ಶ್ರೀ ವಿ.ಆರ್. ದೇಶಪಾಂಡೆ ಮೆಮೋರಿಯಲ್ ಟ್ರಸ್ಟ್
"ಸ್ವಯಂ ಪ್ರೇರಿತ ರಕ್ತದಾನ ಶಿಬಿರ"
GIVE BLOOD
GIVE LIFE



"ಸ್ವಯಂ ಪ್ರೇರಿತ ರಕ್ತದಾನ ಶಿಬಿರ"
GIVE BLOOD
GIVE LIFE


"ಸ್ವಯಂ ಪ್ರೇರಿತ ರಕ್ತದಾನ ಶಿಬಿರ"
GIVE BLOOD
GIVE LIFE


"ಸ್ವಯಂ ಪ್ರೇರಿತ ರಕ್ತದಾನ ಶಿಬಿರ"
GIVE BLOOD
GIVE LIFE